ದಿನಾಂಕ: 20.06.2025 ರಂದು ಸಾಕ್ಷಿಯನ್ನು ಕರೆಸಲಾಯಿತು ಮತ್ತು ಪ್ರಮಾಣ ವಚನ ಬೋಧಿಸಲಾಯಿತು.

**ಪಾಟೀ ಸವಾಲು 11 ಮತ್ತು 12 ನೇ ಪ್ರತಿವಾದಿಗಳ ಪರ ಶ್ರೀ ಎಸ್ ಜೆ ವಕೀಲರಿಂದಃ**

ನನ್ನ ತಂದೆ ಹೆಸರು ಇಬ್ರಾಹಿಂ ಸಾಬ್. ನನ್ನ ತಂದೆಯವರು ಯಾವ ಪತ್ರಕ್ಕೆ ಸಹಿ ಮಾಡಿದ್ದಾರೆ ಎಂದು ನನಗೆ ಹೇಳಲು ಬರುವುದಿಲ್ಲ ಆದರೆ ನನ್ನ ತಂದೆ ಪತ್ರಕ್ಕೆ ಸಹಿ ಮಾಡಿರುತ್ತಾರೆ. ನನ್ನ ಮನೆಯ ಬಳಿ ಬಂದು ದಾಖಲೆ ತೋರಿಸಿದರು ಆಗ ನನ್ನ ತಂದೆ ಸಹಿ ನೋಡಿರುತ್ತೇನೆ. ನ್ಯಾಯಾಲಯದ ಮುಂದೆ ನನ್ನ ತಂದೆ ಸಹಿ ಇರುವ ಪತ್ರವನ್ನು ನನಗೆ ತೋರಿಸಿರುವುದಿಲ್ಲ. ನನ್ನ ತಂದೆ ಯಾವ ಪತ್ರಕ್ಕೆ ಸಹಿ ಮಾಡಿದ್ದಾರೆ ಎಂದು ನನಗೆ ಗೊತ್ತಿಲ್ಲ ಎಂದರೆ ನಿಜ. ಪತ್ರವನ್ನು ಯಾರು ಯಾರಿಗೆ ಬರೆದುಕೊಟ್ಟಿದ್ದಾರೆ ಎಂದು ನಾನು ತಿಳಿದುಕೊಂಡಿಲ್ಲ. ಬೇರೆ ಯಾರು ಆ ಪತ್ರಕ್ಕೆ ಸಹಿ ಮಾಡಿದ್ದರೆ ಎಂದು ನಾನು ತಿಳಿದುಕೊಂಡಿಲ್ಲ. ಕುಮಾರ ಸ್ವಾಮಿಗೆ ಅನುಕೂಲ ಮಾಡಿಕೊಡುವ ಉದ್ದೇಶದಿಂದ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ನನ್ನ ತಂದೆ ಸಹಿ ಮಾಡಿದ ಪತ್ರವನ್ನು ನ್ಯಾಯಾಲಯಕ್ಕೆ ಹಾಜರು ಪಡಿಸಿದ್ದಾರೋ ಇಲ್ಲವೋ ಎಂದು ನನಗೆ ಗೊತ್ತಿಲ್ಲ. ನನಗೆ ಏನು ವಿಚಾರ ಗೊತ್ತಿಲ್ಲದಿದ್ದರೂ ಸಹ ನನ್ನ ತಂದೆ ಪತ್ರಕ್ಕೆ ಸಾಕ್ಷಿಯಾಗಿ ಸಹಿ ಮಾಡಿದ್ದಾರೆ ಎಂದು ಕುಮಾರ ಸ್ವಾಮಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಮರು ವಿಚಾರಣೆ ಪ್ರತಿವಾದಿಗಳ ಪರ ಶ್ರೀ ಬಿ ಎನ್ ಟಿ ವಕೀಲರಿಂದ**

ನಿಪಿ-4 ರ ದಾಖಲೆಯನ್ನು ನನ್ನ ವಿಚಾರಣೆ ಸಮಯದಲ್ಲಿ ನಾನು ನ್ಯಾಯಾಲಯಕ್ಕೆ ಬಂದಾಗ ನನಗೆ ತೋರಿಸಿದಾಗ ನಾನು ನನ್ನ ತಂದೆ ಸಹಿ ನೋಡಿ ಗುರುತಿಸಿರುತ್ತೇನೆ.

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯು ಹೇಳಿದ ಹೇಳಿಕೆಯನ್ನು ನನ್ನ ಉಕ್ತಲೇಖನಕ್ಕೆ ಬೆರಳಚ್ಚು ಮಾಡಿಸಲಾಯಿತು )

ಓ ಹೇ ಕೇ ಸರಿ ಇದೆ

ಹಿರಿಯ ಸಿವಿಲ್ ನ್ಯಾಯಾಧೀಶರು
ಮತ್ತು ಜೆ ಎಂ ಎಫ್ ಸಿ , ಹಿರಿಯೂರು